**Akashvani : Bangalore**
**Regional Bulletin In Kannada**
**05.04.2025 / 18.40 hrs**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**05.04.2025 / 18.40 hrs**

**<><*<><>*><>**

<u>ಮುಖ್ಯಾಂಶಗಳು</u>

೧. ಹಿಂದೂ ಮಹಾಸಾಗರದಲ್ಲಿ ಶಾಂತಿ, ಸ್ಥಿರತೆ ಕಾಪಾಡುವಲ್ಲಿ ನೌಕಾಪಡೆ ಪಾತ್ರ ಶ್ಲಾಘನೀಯ - ರಕ್ಷಣಾ ಸಚಿವ ರಾಜನಾಥ್ ಸಿಂಗ್

೨. ರಾಜ್ಯದಲ್ಲಿ ಎರಡು ತಿಂಗಳ ಬಳಿಕ ಒಳಮೀಸಲಾತಿ ಜಾರಿ - ಮುಖ್ಯಮಂತ್ರಿ ಸಿದ್ದರಾಮಯ್ಯ ಭರವಸೆ

೩. ಚಿಲಿ ಅಧ್ಯಕ್ಷ ಬೆಂಗಳೂರು ಪ್ರವಾಸ - ಗೆಬ್ರಿಯಲ್ ಬೋರಿಕ್‌ಗೆ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಸ್ವಾಗತ

೪. ರಾಜ್ಯದಲ್ಲಿ ಜೆಡಿಎಸ್-ಬಿಜೆಪಿ ಮೈತ್ರಿ ಅಬಾಧಿತ - ಕೇಂದ್ರ ಸಚಿವ ಕುಮಾರಸ್ವಾಮಿ ಸ್ಪಷ್ಟನೆ

೫. ರಾಜ್ಯದಲ್ಲಿ ಆರು ಲಕ್ಷ ಮೆಟ್ರಿಕ್ ಟನ್ ಸಕ್ಕರೆ ಉತ್ಪಾದಿಸುವ ಗುರಿ

**<><*<><>*><>**

ಹಿಂದೂ ಮಹಾಸಾಗರದಲ್ಲಿ ಸುರಕ್ಷತೆಯ ಜೊತೆಗೆ ನೆರೆ ರಾಷ್ಟ್ರಗಳ ಹಿತರಕ್ಷಣೆ ಕೇಂದ್ರ ಸರ್ಕಾರದ ಆದ್ಯತೆ ಎಂದು ರಕ್ಷಣಾ ಸಚಿವ ರಾಜನಾಥ್ ಸಿಂಗ್ ತಿಳಿಸಿದ್ದಾರೆ. ಕಾರವಾರದ ಐಎನ್‌ಎಸ್ ನೌಕಾನೆಲೆಯಲ್ಲಿ ಐಓಎಸ್ ಸಾಗರ ಕಾರ್ಯಾಚರಣೆಗೆ ಹಸಿರು ನಿಶಾನೆ ತೋರಿ ಮಾತನಾಡಿದ ಅವರು, ಹಿಂದೂ ಮಹಾಸಾಗರದಲ್ಲಿ ಶಾಂತಿ, ಸ್ಥಿರತೆ ಕಾಪಾಡುವಲ್ಲಿ ಭಾರತೀಯ ನೌಕಾಪಡೆ ಮಹತ್ವದ ಪಾತ್ರ ವಹಿಸುತ್ತಿದೆ ಎಂದು ಹೇಳಿದ್ದಾರೆ. ಇದೇ ವೇಳೆ ಸೀಬರ್ಡ್ ಯೋಜನೆಯ ವ್ಯಾಪ್ತಿಯಲ್ಲಿ ವಿವಿಧ ಮೂಲಭೂತ ಸೌಕರ್ಯಗಳ ೨ ಸಾವಿರ ಕೋಟಿ ರೂಪಾಯಿ ವೆಚ್ಚದ ಕಾಮಗಾರಿಗಳನ್ನು ಸಚಿವರು ಉದ್ಘಾಟಿಸಿದರು. ಸೀಬರ್ಡ್ ಯೋಜನೆಯ ಕಾಮಗಾರಿಗಳಿಗೆ ಕಚ್ಚಾ ಸಾಮಗ್ರಿಗಳನ್ನು ಆತ್ಮನಿರ್ಭರ ಭಾರತ ಯೋಜನೆಯಲ್ಲಿ ಪಡೆಯಲಾಗಿದೆ ಎಂದು ಹೇಳಿದರು.

**<><*<><>*><>**

ಎರಡು ತಿಂಗಳ ಬಳಿಕ ರಾಜ್ಯದಲ್ಲಿ ಒಳಮೀಸಲಾತಿ ಜಾರಿಯಾಗಲಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ಮಾತನಾಡಿದ ಅವರು, ಒಳ ಮೀಸಲಾತಿ ಬಗ್ಗೆ ಯಾವುದೇ ಅನುಮಾನ ಬೇಡ. ಸುಪ್ರೀಂಕೋರ್ಟ್ ಆದೇಶವನ್ನು ಪಾಲಿಸಲಾಗುವುದು ಎಂದು ಹೇಳಿದ್ದಾರೆ. ಆಯೋಗದ ಅಧ್ಯಕ್ಷ ನಾಗ್‌ಮೋಹನ್ ದಾಸ್ ಅವರು, ಎರಡು ತಿಂಗಳ ಅವಧಿ ಕೇಳಿದ್ದು, ಪರಿಶಿಷ್ಟ ಗುಂಪಿನ ಯಾವ ಜಾತಿಗೆ ಅನ್ಯಾಯವಾಗದಂತೆ ಒಳಮೀಸಲಾತಿ ಜಾರಿ ಮಾಡಲಾಗುವುದು ಎಂದು ಭರವಸೆ ನೀಡಿದ್ದಾರೆ.

**<><*<><>*><>**

ಬೆಂಗಳೂರಿಗೆ ಆಗಮಿಸಿರುವ ಚಿಲಿ ಗಣರಾಜ್ಯದ ಅಧ್ಯಕ್ಷ ಗೇಬ್ರಿಯಲ್ ಬೋರಿಕ್ ಫಾಂಟ್, ಇಂದು ರಾಜಭವನಕ್ಕೆ ಭೇಟಿ ನೀಡಿ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಅವರನ್ನು ಭೇಟಿ ಮಾಡಿದರು. ರಾಜ್ಯಪಾಲರು ಚಿಲಿ ಅಧ್ಯಕ್ಷರನ್ನು ಆತ್ಮೀಯವಾಗಿ ಬರಮಾಡಿಕೊಂಡರು. ನಂತರ ರಾಜ್ಯಪಾಲರೊಂದಿಗೆ ಚಿಲಿಯಿಂದ ಆಗಮಿಸಿದ್ದ ಸಚಿವರು ಹಾಗೂ ಅಧಿಕಾರಿಗಳ ಸಮ್ಮುಖದಲ್ಲಿ ಚರ್ಚೆ ನಡೆಸಿದರು.

**<><*<><>*><>**

ರಾಜ್ಯದಲ್ಲಿ ಜೆಡಿಎಸ್ - ಬಿಜೆಪಿ ಮೈತ್ರಿ ಅಬಾಧಿತ ಎಂದು ಕೇಂದ್ರ ಉಕ್ಕು ಮತ್ತು ಬೃಹತ್ ಕೈಗಾರಿಕಾ ಸಚಿವ ಎಚ್.ಡಿ. ಕುಮಾರಸ್ವಾಮಿ ಬೆಂಗಳೂರಿನಲ್ಲಿಂದು ಸ್ಪಷ್ಟಪಡಿಸಿದ್ದಾರೆ. ರಾಜ್ಯ ಸರ್ಕಾರದ ವಿರುದ್ಧ ಬೆಲೆ ಏರಿಕೆ ಸೇರಿದಂತೆ ಇನ್ನಿತರ ವಿಷಯಗಳನ್ನು ಮುಂದಿಟ್ಟುಕೊಂಡು ಬಿಜೆಪಿ ಹೋರಾಟ ನಡೆಸುತ್ತಿದೆ. ಜೆಡಿಎಸ್ ಕೂಡ ಈ ನಿಟ್ಟಿನಲ್ಲಿ ಹೋರಾಟ ಹಮ್ಮಿಕೊಂಡಿದೆ. ಎರಡು ಪಕ್ಷಗಳ ನಡುವೆ ಯಾವುದೇ ಒಡಕಿಲ್ಲ ಎಂದು ಹೇಳಿದ್ದಾರೆ.

ಬೆಂಗಳೂರು ಮಹಾನಗರ ಪಾಲಿಕೆಯನ್ನು ಆರೇಳು ಭಾಗವನ್ನಾಗಿ ವಿಂಗಡಿಸಲು ಹೊರಟಿರುವ ರಾಜ್ಯ ಸರ್ಕಾರದ ನಡೆ ಅತ್ಯಂತ ಖಂಡನಾರ್ಹ. ಜೆಡಿಎಸ್ ಪಕ್ಷ ನಗರದಾದ್ಯಂತ ಜನಾಂದೋಲನ ಹಮ್ಮಿಕೊಳ್ಳಲು ನಿರ್ಧರಿಸಿದೆ ಎಂದು ತಿಳಿಸಿದ್ದಾರೆ.

**<><*<><>*><>**

ಕೋವಿಡ್ ಸಂದರ್ಭದ ಹಗರಣಗಳ ತನಿಖೆಗೆ ನೇಮಿಸಲಾಗಿದ್ದ ತನಿಖಾ ಆಯೋಗದ ಆಯುಕ್ತರಾದ ನಿವೃತ್ತ ನ್ಯಾಯಮೂರ್ತಿ ಜಾನ್ ಮೈಕೇಲ್ ಡಿ ಕುನ್ಹಾ ತನಿಖೆಯ ಮಧ್ಯಂತರ ವರದಿಯನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಸಲ್ಲಿಸಿದರು. ಈ ಸಂದರ್ಭದಲ್ಲಿ ಸರ್ಕಾರದ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್ ಅವರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು. ಬಿಜೆಪಿ ಸರ್ಕಾರದ ಅವಧಿಯಲ್ಲಿ ಕೋವಿಡ್-೧೯ ಹಗರಣ ನಡೆದಿದೆ ಎಂಬ ಆರೋಪದ ಹಿನ್ನೆಲೆಯಲ್ಲಿ ತನಿಖೆಗೆ ನಿವೃತ್ತ ನ್ಯಾಯಮೂರ್ತಿ ಜಾನ್ ಮೈಕೇಲ್ ಡಿ ಕುನ್ಹಾ ನೇತೃತ್ವದಲ್ಲಿ ಸಮಿತಿ ರಚಿಸಲಾಗಿತ್ತು.

**<><*<><>*><>**

ಪಶುಸಂಗೋಪನಾ ಇಲಾಖೆಯಡಿ ಕಾರ್ಯನಿರ್ವಹಿಸುವ ಪಶು ಸಖಿಯರ ಮಾಸಿಕ ಗೌರವಧನ ಹೆಚ್ಚಳ ಮಾಡುವಂತೆ ಕೇಂದ್ರ ಸರ್ಕಾರಕ್ಕೆ ಮನವಿ ಮಾಡಲಾಗಿದೆ ಎಂದು ಪಶುಸಂಗೋಪನೆ ಸಚಿವ ಕೆ.ವೆಂಕಟೇಶ್ ತಿಳಿಸಿದ್ದಾರೆ. ದಕ್ಷಿಣ ಕನ್ನಡ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿಂದು ಪಶುಪಾಲನಾ ಮತ್ತು ಪಶುವೈದ್ಯಕೀಯ ತರಬೇತಿ ಕೇಂದ್ರದ ಉದ್ಘಾಟನೆ ನೆರವೇರಿಸಿ ಮಾತನಾಡಿದ ಅವರು, ರಾಜ್ಯದ ಗ್ರಾಮಾಂತರ ಭಾಗದಲ್ಲಿ ಪಶು ಸಖಿಯರ ಅವರ ಸೇವೆ ಶ್ಲಾಘನೀಯ ಎಂದು ತಿಳಿಸಿದ್ದಾರೆ. ದಕ್ಷಿಣ ಕನ್ನಡ, ಉಡುಪಿ ಜಿಲ್ಲೆಗಳನ್ನು ಒಳಗೊಂಡ ದಕ್ಷಿಣ ಕನ್ನಡ ಸಹಕಾರಿ ಹಾಲು ಉತ್ಪಾದಕ ಒಕ್ಕೂಟ ಲಾಭದಲ್ಲಿದೆ. ರಾಜ್ಯದಲ್ಲಿ ೧ ಕೋಟಿ ಲೀಟರ್ ಹಾಲು ಉತ್ಪಾದನೆಯಾಗುತ್ತಿದ್ದು, ಬೇಸಿಗೆಯಲ್ಲಿ ೮೯ ಲಕ್ಷ ಲೀಟರ್‌ಗೆ ಇಳಿಕೆಯಾಗಿದೆ ಎಂದು ಮಾಹಿತಿ ನೀಡಿದ್ದಾರೆ.

**<><*<><>*><>**

ಕೊಪ್ಪಳದಲ್ಲಿಂದು ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಕುಡಿಯುವ ನೀರು ಮತ್ತು ಮೇವಿನ ಸಮಸ್ಯೆ ಕುರಿತು ಕೈಗೊಳ್ಳಬೇಕಾದ ಮುನ್ನೆಚ್ಚರಿಕೆ ಕ್ರಮಗಳ ಕುರಿತು ಜಿಲ್ಲಾ ಉಸ್ತುವಾರಿ ಸಚಿವ ಶಿವರಾಜ ಎಸ್. ತಂಗಡಗಿ ಅಧಿಕಾರಿಗಳೊಂದಿಗೆ ಸಭೆ ನಡೆಸಿದರು. ಯಾವುದೇ ಸಮಯದಲ್ಲಿ ರೈತರು ಹಾಗೂ ಜನರು ನೀರಿನ ಸಮಸ್ಯೆ ಬಗ್ಗೆ ಕರೆ ಮಾಡಿದರೆ ಸ್ಪಂದಿಸುವಂತೆ ಅಧಿಕಾರಿಗಳಿಗೆ ಸಚಿವರು ಸೂಚನೆ

ನೀಡಿದ್ದಾರೆ. ಸಭೆಯಲ್ಲಿ ಜಿಲ್ಲಾಧಿಕಾರಿ ನಲೀನ್ ಅತುಲ್, ಜಿಲ್ಲಾ ಪಂಚಾಯಿತಿ ಕಾರ್ಯ ನಿರ್ವಾಹಣಾಧಿಕಾರಿ ರಾಹುಲ್ ರತ್ನಂ ಪಾಂಡೆ ಸೇರಿದಂತೆ ಹಲವು ಅಧಿಕಾರಿಗಳು ಉಪಸ್ಥಿತರಿದ್ದರು.

**<><*<><>*><>**

ಕರ್ನಾಟಕದಲ್ಲಿ ೮೦ ಸಕ್ಕರೆ ಕಾರ್ಖಾನೆಗಳಿದ್ದು, ಈ ಪೈಕಿ ಕೆಲವು ಮುಚ್ಚಿಹೋಗಿವೆ. ಈಗಿರುವ ಕಾರ್ಖಾನೆಗಳಿಗೆ ಹೊಸ ತಂತ್ರಜ್ಞಾನ ಅಳವಡಿಕೆ ಹಾಗೂ ಹೆಚ್ಚು ಇಳುವರಿ ನೀಡುವ ಕಬ್ಬು ಬೆಳೆಯುವ ನೂತನ ಕ್ರಮಗಳ ಬಗ್ಗೆ ಸಮಾಲೋಚನೆ ನಡೆಸಲಾಗುವುದು ಎಂದು ಸಕ್ಕರೆ ಖಾತೆ ಸಚಿವ ಶಿವಾನಂದ ಪಾಟಿಲ್ ತಿಳಿಸಿದ್ದಾರೆ. ಬೆಳಗಾವಿಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸಕ್ಕರೆ ಉತ್ಪಾದನೆಯಲ್ಲಿ ಕರ್ನಾಟಕ ಮೂರನೇ ಅತೀ ದೊಡ್ಡ ರಾಜ್ಯವಾಗಿದೆ. ಆದರೆ, ಕಳೆದ ವರ್ಷದ ಬರದ ಕಾರಣದಿಂದಾಗಿ ಸಕ್ಕರೆ ಉತ್ಪಾದನೆ ಕಡಿಮೆಯಾಗಿದೆ. ಮುಂಬರುವ ದಿನಗಳಲ್ಲಿ ಆರು ಲಕ್ಷ ಮೆಟ್ರಿಕ್ ಟನ್ ಸಕ್ಕರೆ ಉತ್ಪಾದನೆ ಮಾಡುವ ಗುರಿ ಹೊಂದಲಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ.

**ಧ್ವನಿ : ಶಿವನಾಂದ ಪಾಟೀಲ್**

ಕೆಲ ಕಾರ್ಖಾನೆಗಳಲ್ಲಿ ಅವ್ಯವಹಾರ ಮೇಲ್ನೋಟಕ್ಕೆ ಸಾಬೀತಾಗಿದ್ದು ಅವರ ವಿರುದ್ಧ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದ್ದಾರೆ. ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಒಡೆತನದ ಮೃಣಾಲ್ ಸಕ್ಕರೆ ಕಾರ್ಖಾನೆ ವಿರೋಧಿಸಿ ಸ್ಥಳೀಯರಿಂದ ದೂರು ಬಂದರೆ ತನಿಖೆ ನಡೆಸಲಾಗುವುದು ಎಂದು ಹೇಳಿದ್ದಾರೆ.

**<><*<><>*><>**

ಕರ್ನಾಟಕದ ಏಕಲವ್ಯ ಮಾದರಿ ವಸತಿ ಶಾಲೆಗಳಲ್ಲಿ ವ್ಯಾಸಂಗ ಮಾಡಿ ರಾಷ್ಟ್ರಮಟ್ಟದಲ್ಲಿ ಪ್ರಥಮ ಸ್ಥಾನ ಪಡೆದ ಮೂವರು ವಿದ್ಯಾರ್ಥಿಗಳನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಇಂದು ಕಾವೇರಿ ನಿವಾಸದಲ್ಲಿ ಸನ್ಮಾನಿಸಿದರು. ಎಸ್ಎಸ್ಎಲ್ಸಿ ಯಲ್ಲಿ ಶೇಕಡ ೯೬.೮ ಅಂಕಗಳಿಸಿ ಪ್ರಥಮ ಸ್ಥಾನ ಪಡೆದ ಚಿತ್ರದುರ್ಗ ಜಿಲ್ಲೆಯ ಸಂಜೀವ್ ಮುತ್ತಯ್ಯಗೆ ೨ ಲಕ್ಷ ರೂಪಾಯಿ ಹಾಗೂ ರಾಯಚೂರು ಜಿಲ್ಲೆಯ ವಿರೇಶ್‌ಗೆ ೨ ಲಕ್ಷ ರೂಪಾಯಿ, ಬೆಳಗಾವಿ ಜಿಲ್ಲೆಯ ಲೋಹಿತ್ ನೀಲಪ್ಪ ಅವರಿಗೆ ೧ ಲಕ್ಷ ರೂಪಾಯಿ ಬಹುಮಾನ ವಿತರಿಸಿದ್ದಾರೆ. ರಾಜ್ಯದ ಒಟ್ಟು ೧೨ ಏಕಲವ್ಯ ಮಾದರಿ ವಸತಿ ಶಾಲೆಗಳಲ್ಲಿ ಒಟ್ಟು ೪ ಸಾವಿರದ ೫೩೪ ವಿದ್ಯಾರ್ಥಿಗಳು ವ್ಯಾಸಂಗ ಮಾಡಿದ್ದಾರೆ.

**<><*<><>*><>**

ವಿಶ್ವವಿಖ್ಯಾತ ಮೇಲುಕೋಟೆ ವೈರಮುಡಿ ಉತ್ಸವ ಇದೇ ಸೋಮವಾರ ನಡೆಯಲಿದ್ದು, ಈ ನಿಟ್ಟಿನಲ್ಲಿ ಎಲ್ಲಾ ರೀತಿಯ ಸಿದ್ಧತಾ ಕಾರ್ಯ ಮುಕ್ತಾಯವಾಗಿದೆ ಎಂದು ಮಂಡ್ಯ ಜಿಲ್ಲಾ ಉಸ್ತುವಾರಿ ಸಚಿವ ಎನ್.ಚಲುವರಾಯಸ್ವಾಮಿ ತಿಳಿಸಿದ್ದಾರೆ. ಮಂಡ್ಯದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮೇಲುಕೋಟೆಯ ಚಲುವನಾರಾಯಣಸ್ವಾಮಿಯ ಬ್ರಹ್ಮರಥೋತ್ಸವ ಆರಂಭವಾಗಿದ್ದು, ಇದೇ ೭ರ ರಾತ್ರಿ ಎಂಟು ಗಂಟೆಗೆ ವೈರಮುಡಿ ಬ್ರಹ್ಮೋತ್ಸವ ಆರಂಭವಾಗಲಿದೆ.

**ಧ್ವನಿ : ಸಚಿವ ಎನ್.ಚಲುವರಾಯಸ್ವಾಮಿ**

**<><*<><>*><>**

ರಾಜ್ಯಾದ್ಯಂತ ಹಸಿರು ಕ್ರಾಂತಿಯ ಹರಿಕಾರ, ಭಾರತದ ಮಾಜಿ ಉಪಪ್ರಧಾನಿ ಡಾ. ಬಾಬು ಜಗಜೀವನ್ ರಾಮ್ ಅವರ ೧೧೮ನೇ ಜನ್ಮ ದಿನಾಚರಣೆ ನಡೆಯಿತು. ಹಸಿರು ಕ್ರಾಂತಿ ಹರಿಕಾರ ಡಾ.ಬಾಬು ಜಗಜೀವನ್ ರಾಮ್ ಅವರು ವಿಶ್ವ ಕಂಡ ಅಪರೂಪದ ನಾಯಕರಾಗಿದ್ದಾರೆ ಎಂದು ಯಾದಗಿರಿ ಜಿಲ್ಲಾ ಉಸ್ತುವಾರಿ ಸಚಿವ ಶರಣಬಸಪ್ಪ ದರ್ಶನಾಪುರ ತಿಳಿಸಿದ್ದಾರೆ. ದೇಶಕ್ಕೆ ಆಹಾರ ಕೊರತೆಯಾದಾಗ ಹಸಿರು ಕ್ರಾಂತಿ ಮೂಲಕ ಆಹಾರ ಧಾನ್ಯಗಳ ಉತ್ಪಾದನೆಗೆ ಹೆಚ್ಚಿನ ಒತ್ತು ನೀಡುವ ಮೂಲಕ ಬಡಜನರ  ಆಹಾರದ ಸಮಸ್ಯೆ ನಿವಾರಣೆ ಮಾಡಿದ ಮಹಾನ್ ಚೇತನ ಎಂದು ಬಣ್ಣಿಸಿದ್ದಾರೆ. ಡಾ.ಬಾಬು ಜಗಜೀವನರಾಮ್ ಅವರ ೧೧೮ ನೇ ಜಯಂತಿ ಕಾರ್ಯಕ್ರಮಕ್ಕೆ ಕೊಪ್ಪಳ ಜಿಲ್ಲೆಯಲ್ಲಿ ಉಸ್ತುವಾರಿ ಸಚಿವ ಶಿವರಾಜ್ ತಂಗಡಗಿ ಚಾಲನೆ ನೀಡಿದರು. ಸಮಾಜ ಸುಧಾರಣೆಗೆ ಶ್ರಮಿಸಿದವರಲ್ಲಿ ಹಸಿರುಕ್ರಾಂತಿಯ ಹರಿಕಾರ, ಮಾಜಿ ಉಪಪ್ರಧಾನಿ ಡಾ. ಬಾಬು ಜಗಜೀವನರಾಮ್ ಪ್ರಮುಖರು ಎಂದು ಗದಗ ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್ ತಿಳಿಸಿದ್ದಾರೆ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<>ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ <>*><>**